# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 968 |
| 2 | ಸದಸ್ಯರ ಹೆಸರು | : | ಶ್ರೀ ಅ. ದೇವೇಗೌಡ<br>(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | : | 14.12.2023 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಪ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸಿಲಿಕಾನ್ ಸಿಟಿ ಬೆಂಗಳೂರು ನಗರದಲ್ಲಿ 24x7 ಕರ್ತವ್ಯ ನಿರ್ವಹಣೆ ಮಾಡುವ ಕಾನೂನು ಸುವ್ಯವಸ್ಥೆ ವಿಭಾಗದ ಪೋಲೀಸ್ ಇಲಾಖೆಯಿಂದ ಪಿ.ಸಿ ಯಿಂದ ಪಿ.ಎಸ್.ಐ ರವರೆಗೆ ಪ್ರಸ್ತುತ 12 ರಿಂದ ಹೆಚ್ಚು ತಾಸು ಕರ್ತವ್ಯ ನಿರ್ವಹಣೆ ಮಾಡುತ್ತಿದ್ದು ಸದರಿಯವರಿಗೆ 3 ಪಾಳಿಯಲ್ಲಿ ಕರ್ತವ್ಯಕ್ಕೆ ಅವಕಾಶ ಮಾಡಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು; | ಬೆಂಗಳೂರು ನಗರ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ಸಿಬ್ಬಂದಿಗಳನ್ನು ಪೊಲೀಸ್ ಮಾನ್ಯೂಯಲ್‌ನ ಆದೇಶದನ್ವಯ 03 ಪಾಳಿಗಳಲ್ಲಿಯೇ ಕರ್ತವ್ಯ ನಿರ್ವಹಿಸಲು ನಿಯೋಜಿಸಲಾಗುತ್ತಿದೆ. ಠಾಣೆಗಳ ವ್ಯಾಪ್ತಿಯಲ್ಲಿ ಕಾನೂನು ಸುವ್ಯವಸ್ಥೆ ನಿರ್ವಹಣೆ, ಬಂದೋಬಸ್ತ್ ಕರ್ತವ್ಯ ಇತ್ಯಾದಿ ಕರ್ತವ್ಯದ ಒತ್ತಡದ ಕೆಲವು ಸಂದರ್ಭಗಳಲ್ಲಿ ಆಯಾ ಠಾಣಾಧಿಕಾರಿಗಳು ಅವಶ್ಯಕತೆಗನುಗುಣವಾಗಿ ಸಿಬ್ಬಂದಿಗಳನ್ನು ಸೀಮಿತ ಅವಧಿಗೆ 02 ಪಾಳಿಗಳಲ್ಲಿ ಕರ್ತವ್ಯಕ್ಕೆ ನಿಯೋಜಿಸಿರುತ್ತಾರೆ.<br>ಮುಂದುವರೆದಂತೆ, ಪೊಲೀಸ್ ಘಟಕದಲ್ಲಿ ಪಿಸಿಯಿಂದ ಪಿಎಸ್‌ಐ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳ ಕಾರ್ಯದೊತ್ತಡ ಕಡಿಮೆಗೊಳಿಸಲು ಅನುವಾಗುವಂತೆ ಪ್ರಸ್ತುತ 2023-24 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 341 ರನ್ವಯ ಬೆಂಗಳೂರು ನಗರ ಪೊಲೀಸ್ ಘಟಕದ ಬಲವರ್ಧನೆಗಾಗಿ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 34 ಪಿಓಪಿ 2023, ದಿನಾಂಕ: 14.09.2023 ರಲ್ಲಿ ವಿವಿಧ ದರ್ಜೆಯ ಒಟ್ಟು 2454 ಹುದ್ದೆಗಳನ್ನು ಮಂಜೂರು ಮಾಡಲಾಗಿದೆ ಹಾಗೂ ಬೆಂಗಳೂರು ನಗರ ಪೊಲೀಸ್ ಆಯುಕ್ತರ ಘಟಕದ 08 ಕಾನೂನು ಮತ್ತು ಸುವ್ಯವಸ್ಥೆ ವಿಭಾಗಗಳಿಗೆ ಪ್ರಮುಖ ಪೋಲಿಸಿಂಗ್ ಕರ್ತವ್ಯಗಳನ್ನು ಹೊರತುಪಡಿಸಿ ಇತರೆ ಕಾರ್ಯಗಳ ನಿರ್ವಹಣೆಗೆ ಒಟ್ಟು 1385 ಗೃಹ ರಕ್ಷಕ ಸಿಬ್ಬಂದಿಗಳನ್ನು ಹಂಚಿಕೆ ಮಾಡಲಾಗಿರುತ್ತದೆ. |
| (ಆ) | ಔರಾದ್ಕರ್ ವರದಿಯನ್ನು ಪೂರ್ಣವಾಗಿ ಯಾವಾಗ ಜಾರಿ ಮಾಡಲಾಗುವುದು? | ಶ್ರೀ ರಾಘವೇಂದ್ರ ಔರಾದ್ಕರ್ ವರದಿಯ ಶಿಫಾರಸ್ಸುಗಳನ್ನು ಭಾಗಶಃ ಅಂಗೀಕರಿಸಿ ರಾಜ್ಯ ಸರ್ಕಾರವು ಅನುಯಾಯಿ, ಜಮೇದಾರ್ ಅನುಯಾಯಿ, ಪಿ.ಎಸ್.ಐ ಹಾಗೂ ಪೊಲೀಸ್ ಉಪಾಧೀಕ್ಷಕರುಗಳ ವೇತನ ಶ್ರೇಣಿಗಳನ್ನು ಹೊರತುಪಡಿಸಿ ಇತರೆ ಎಲ್ಲಾ ವೃಂದದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳ ವೇತನ ಶ್ರೇಣಿಗಳನ್ನು ಪರಿಷ್ಕರಣೆ ಮಾಡಲಾಗಿದೆ. |

| | | |
|---|---|---|
| | | ಪೊಲೀಸ್ ಅಧಿಕಾರಿ/ ಸಿಬ್ಬಂದಿಗಳ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಮಾಡಿದ್ದ ಶಿಫಾರಸ್ಸುಗಳಲ್ಲಿ ಗಂಡಾಂತರ ಭತ್ಯೆ, ಶ್ರಮದಾನ ಭತ್ಯೆ ಹಾಗೂ ಸದೃಢ ಭತ್ಯೆಗಳನ್ನು ಹೊರತುಪಡಿಸಿ, ಇತರೆ ಎಲ್ಲಾ ಭತ್ಯೆಗಳನ್ನು ಪರಿಷ್ಕರಣೆ ಮಾಡಲಾಗಿರುತ್ತದೆ. |

ಸಂಖ್ಯೆ: ಒಇ 138 ಪಿಇಐ 2023

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು